ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಆರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 19ನೇ ಮಾರ್ಚ್, 2020

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹನ್ನೊಂದನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹನ್ನೊಂದನೇ ಪಟ್ಟಿ

2. ವರದಿಯನ್ನೊಪ್ಪಿಸುವುದು

ಶ್ರೀ ಎಸ್. ಕುಮಾರ್ ಬಂಗಾರಪ್ಪ (ಅಧ್ಯಕ್ಷರು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ) ಅವರು 2019-20ನೇ ಸಾಲಿನ ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ಮೊದಲನೆಯ ವರದಿಯನ್ನೊಪ್ಪಿಸುವುದು.

3. ವಿತ್ತೀಯ ಕಾರ್ಯಕಲಾಪಗಳು

1) 2020-21ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ

ಹಾಗೂ

1 ರಿಂದ 28 ರವರೆಗಿನ ಅನುದಾನ ಬೇಡಿಕೆಗಳ ಮೇಲೆ ಮುಂದುವರೆದ ಚರ್ಚೆ

2) 2019-20ನೇ ಸಾಲಿನ ಪೂರಕ ಅಂದಾಜುಗಳ (3ನೇ ಹಾಗೂ ಅಂತಿಮ ಕಂತು) ಮೇಲೆ ಚರ್ಚೆ.

4. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. ಶ್ರೀ ಜೆ.ಸಿ. ಮಾಧುಸ್ವಾಮಿ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು) ಅವರು:–

ಅ) 2020ನೇ ಸಾಲಿನ ಭಾರತ ರಾಷ್ಟ್ರೀಯ ಕಾನೂನು ವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಶ್ರೀ ಜೆ.ಸಿ. ಮಾಧುಸ್ವಾಮಿ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು) ಅವರು:–

ಅ) 2020ನೇ ಸಾಲಿನ ಕರ್ನಾಟಕ ರಾಜಭಾಷಾ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. ಶ್ರೀ ಜೆ.ಸಿ. ಮಾಧುಸ್ವಾಮಿ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು) ಅವರು:–

ಅ) 2020ನೇ ಸಾಲಿನ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:–

ಅ) 2020ನೇ ಸಾಲಿನ ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಹೆಚ್.ಕೆ. ಪಾಟೀಲ್, ಆರಗ ಜ್ಞಾನೇಂದ್ರ, ನೆಹರು ಚ. ಓಲೇಕಾರ್, ಕೆ. ರಘುಪತಿ ಭಟ್, ಲಾಲಾಜಿ ಆರ್. ಮೆಂಡನ್, ಎ.ಟಿ. ರಾಮಸ್ವಾಮಿ ಹಾಗೂ ಇವರುಗಳು –** 2011ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್‌ಗಳ ನೇಮಕಾತಿಯಲ್ಲಿ ಆದ ವಿಳಂಬ, ಕರ್ನಾಟಕ ಆಡಳಿತ ಮಂಡಳಿಯ ಆದೇಶ, ಸಚಿವ ಸಂಪುಟ ಸಭೆಯ ನಿರ್ಣಯ ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶಕ್ಕೆ ಅನುಗುಣವಾಗಿ ಅಡ್ವೋಕೇಟ್ ಜನರಲ್ ಅವರು ನೀಡಿರುವ ಅಭಿಪ್ರಾಯಗಳ ದಾಖಲೆಗಳ ಅನುಸಾರ ಸದರಿ ಪ್ರಕರಣದಲ್ಲಿ ಸಂವಿಧಾನದ ಅನುಚ್ಛೇದ 323(2)ರ ಉಲ್ಲಂಘನೆಯಾಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

2) **ಶ್ರೀಯುತರುಗಳಾದ ಕೆ. ಮಾಡಾಳು ವಿರೂಪಾಕ್ಷಪ್ಪ, ಬಿ.ಸಿ. ನಾಗೇಶ್ ಹಾಗೂ ಶಂಕರ ಬಿ. ಪಾಟೀಲ ಮುನೇನಕೊಪ್ಪ ಇವರುಗಳು** – ದಾವಣಗೆರೆ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿನ ರೈತರು ಅಮೃತ್ ಮಹಲ್ ಕಾವಲಿನಲ್ಲಿ ಅನಧಿಕೃತವಾಗಿ ಸಾಗುವಳಿ ಮಾಡುತ್ತಿದ್ದು, ಇವರುಗಳಿಗೆ ಸಾಗುವಳಿ ಚೀಟಿಯನ್ನು ನೀಡುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

3) **ಶ್ರೀಯುತರುಗಳಾದ ಕೆ.ಜೆ. ಜಾರ್ಜ್, ಕೃಷ್ಣಬೈರೇಗೌಡ, ಬಿ.ಎಸ್. ಸುರೇಶ್, ಶ್ರೀಮತಿ ಸೌಮ್ಯ ರೆಡ್ಡಿ ಹಾಗೂ ರಿಜ್ವಾನ್ ಅರ್ಷದ್ ಇವರುಗಳು** – ಬೆಂಗಳೂರು ಸಮಗ್ರ ಅಭಿವೃದ್ಧಿಗೆ ಎಲ್ಲಾ ಇಲಾಖೆಗಳನ್ನು ಒಟ್ಟುಗೂಡಿಸಿ ಮಂಡಿಸಿರುವ ಪ್ರತ್ಯೇಕ ಕಾಯ್ದೆ ಮತ್ತು ಆಡಳಿತ ಸುಧಾರಣೆ ಮಾಡುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

4) **ಶ್ರೀಯುತರುಗಳಾದ ಎ. ಮಂಜುನಾಥ್, ಡಾ. ಕೆ. ಅನ್ನದಾನಿ ಹಾಗೂ ಸಿ.ಎಸ್. ಪುಟ್ಟರಾಜು ಇವರುಗಳು** – ರೇಷ್ಮೆ ಬೆಳೆಗಾರರ ಹಾಗೂ ರೇಷ್ಮೆ ಗೂಡಿನ ಉದ್ದಿಮೆದಾರರಿಗೆ ಅನುಕೂಲವಾಗುವಂತೆ ಮೂಲಭೂತ ಸೌಕರ್ಯಗಳನ್ನೊಳಗೊಂಡಂತೆ ಹೈಟೆಕ್ ರೇಷ್ಮೆ ಗೂಡಿನ ಮಾರುಕಟ್ಟೆಯನ್ನು ನಿರ್ಮಾಣ ಮಾಡುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

... 4/ ..

6. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು** – ಲೋಕೋಪಯೋಗಿ ಮತ್ತು ಜಲಸಂಪನ್ಮೂಲ ಇಲಾಖೆಗಳನ್ನು ಪ್ರತ್ಯೇಕಿಸುವಲ್ಲಿ ಆಗಿರುವ ಲೋಪದೋಷಗಳನ್ನು ಸರಿಪಡಿಸಿ, ಪಾರದರ್ಶಕ ಕ್ರಮಗಳನ್ನು ಕೈಗೊಂಡು ಅಧಿಕಾರಿ/ನೌಕರರುಗಳ ಜ್ಯೇಷ್ಠತೆ ಆಧಾರದ ಮೇಲೆ ಸಿ.ಇ.ಟಿ. ಕೌನ್ಸಿಲಿಂಗ್ ರೀತಿ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

2) **ಶ್ರೀ ಬಸನಗೌಡ ದದ್ದಲ ಅವರು** – ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಚಿಕ್ಕ ಮಂಚಾಲ ಗ್ರಾಮದ ಹತ್ತಿರ ತುಂಗಭದ್ರಾ ನದಿಗೆ ಬ್ರಿಡ್ಜ್ ಕಂ ಬ್ಯಾರೇಜ್ ಹಾಗೂ ಗುಂಜಳ್ಳಿ ಗ್ರಾಮದ ಬಸವ ಕೆರೆಗೆ ನೀರು ತುಂಬಿಸುವ ಯೋಜನೆಗಳ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

3) **ಶ್ರೀ ಡಿ. ವೇದವ್ಯಾಸ ಕಾಮತ್ ಅವರು** – ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಪಚ್ಚನಾಡಿ ಹಾಗೂ ಕುಡುಪು ಗ್ರಾಮದ ಘನತ್ಯಾಜ್ಯ ಲ್ಯಾಂಡ್‌ಫಿಲ್ ಘಟಕದ ಕುಸಿತದಿಂದ ಹಾನಿಗೊಳಗಾಗಿರುವ ಕುಟುಂಬಗಳಿಗೆ ಪುನರ್ವಸತಿ ಕಲ್ಪಿಸುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

4) **ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು** – ಹಾಸನ ಜಿಲ್ಲೆ ಸಕಲೇಶಪುರ ಮತ್ತು ಆಲೂರು ತಾಲ್ಲೂಕಿನಲ್ಲಿರುವ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಎಂ.ಕಾಂ. ಮತ್ತು ವಿಜ್ಞಾನ ಸ್ನಾತಕೋತ್ತರ ಪದವಿ ಶಿಕ್ಷಣವನ್ನು ಆರಂಭಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ) ಗಮನ ಸೆಳೆಯುವುದು.

5) **ಶ್ರೀ ದಿನೇಶ್ ಗುಂಡೂರಾವ್ ಅವರು** – ಜಕ್ಕರಾಯನಕೆರೆ ಪ್ರದೇಶದ ಆಟದ ಮೈದಾನವನ್ನು ಸಾರ್ವಜನಿಕರ ಕ್ರೀಡಾ ಚಟುವಟಿಕೆಗಳಿಗೆ ಮೀಸಲಿರಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

6) **ಶ್ರೀ ಸಾ.ರಾ. ಮಹೇಶ್ ಅವರು** – ಮೈಸೂರು ಹಾಲು ಉತ್ಪಾದಕರ ಒಕ್ಕೂಟದ ನೇಮಕಾತಿ ಪ್ರಕ್ರಿಯೆಯಲ್ಲಿ ನಡೆದಿರುವ ಅಕ್ರಮಗಳ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

... 5/ ..

7) **ಶ್ರೀ ಕೃಷ್ಣಬೈರೇಗೌಡ ಅವರು** – ನ್ಯಾಯಾಲಯದ ಆದೇಶವನ್ನು ಉಲ್ಲಂಘಿಸಿರುವ ಯಲಹಂಕ ತಾಲ್ಲೂಕು ತಹಸೀಲ್ದಾರ್ ರವರ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

8) **ಶ್ರೀ ಐಹೊಳೆ ದುರ್ಯೋಧನ ಮಹಾಲಿಂಗಪ್ಪ ಅವರು** – ಬೆಳಗಾವಿ ಜಿಲ್ಲೆ ರಾಯಭಾಗ ಮತಕ್ಷೇತ್ರದ ಕಂಕನವಾಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಸರ್ಕಾರಿ ಗೈರಾಣ ಜಮೀನಿಗೆ ಖಾಸಗಿ ವ್ಯಕ್ತಿಗಳ ಹೆಸರಿನಲ್ಲಿ ನಕಲಿ ದಾಖಲಾತಿಗಳನ್ನು ಸೃಷ್ಟಿಸಲು ಸಹಕರಿಸಿರುವ ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

9) **ಶ್ರೀ ಈಶ್ವರ ಬಿ. ಖಂಡ್ರೆ ಅವರು** – ಬೀದರ್‌ನಲ್ಲಿರುವ ಕರ್ನಾಟಕ ಪಶು ವೈದ್ಯಕೀಯ, ಪಶು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಗಳಲ್ಲಿ ನಡೆದಿರುವ ಭ್ರಷ್ಟಾಚಾರದ ಬಗ್ಗೆ ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

10) **ಶ್ರೀ ಹರೀಶ್ ಪೂಂಜ ಅವರು** – ಎಂಡೋಸಲ್ಫಾನ್ ಪೀಡಿತರಿಗೆ ಕೊಕ್ಕಡದ ಮಾದರಿಯಲ್ಲಿ ಎಂಡೋಪಾಲನಾ ಕೇಂದ್ರಗಳನ್ನು ಸರ್ಕಾರವೇ ನಿರ್ವಹಣೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

11) **ಶ್ರೀ ಆನಂದ ಸಿದ್ದು ನ್ಯಾಮಗೌಡ ಅವರು** – ಜಮಖಂಡಿ ಮತಕ್ಷೇತ್ರ ವ್ಯಾಪ್ತಿಯಲ್ಲಿ ಕೃಷ್ಣಾ ನದಿಗೆ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಜಲ ಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

12) **ಶ್ರೀ ಪುಟ್ಟರಂಗ ಶೆಟ್ಟಿ ಸಿ. ಅವರು** – ಚಾಮರಾಜನಗರ ಜಿಲ್ಲೆಯಲ್ಲಿ ಕೃಷಿ ವಿಶ್ವವಿದ್ಯಾನಿಲಯದ ಅಡಿಯಲ್ಲಿ ಕೃಷಿ ಕಾಲೇಜು ಆರಂಭಿಸುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

13) **ಶ್ರೀ ಜಿ. ಸೋಮಶೇಖರ ರೆಡ್ಡಿ ಅವರು** – ಬಳ್ಳಾರಿ ನಗರದ ಕುಡಿಯುವ ನೀರಿನ ಯೋಜನೆಯಲ್ಲಿನ ವಿಳಂಬದ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

14) **ಶ್ರೀ ಕೆ.ಜಿ. ಬೋಪಯ್ಯ ಅವರು** – ಕೊಡಗು ಜಿಲ್ಲೆಯಲ್ಲಿ ಬಿದ್ದ ಭಾರಿ ಮಳೆಯಿಂದಾಗಿ ಹಾನಿಗೀಡಾಗಿದ್ದ ರಸ್ತೆ, ಸೇತುವೆ, ಶಾಲೆಗಳು, ಅಂಗನವಾಡಿ ಕೇಂದ್ರಗಳು ಹಾಗೂ ಮತ್ತಿತರ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

15) **ಶ್ರೀ ಆರ್. ಮಂಜುನಾಥ್ ಮತ್ತು ಇತರರು** – ದಾಸರಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿನ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳು ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

7. ಅರ್ಧ ಗಂಟೆ ಕಾಲಾವಧಿ ಚರ್ಚೆ

1) **ಶ್ರೀ ಮುನಿಯಪ್ಪ ವಿ. ಅವರು** – "ವಸತಿ ಯೋಜನೆ" ಕುರಿತು **ದಿನಾಂಕ: 09.03.2020** ರಂದು ಸದನದಲ್ಲಿ ಉತ್ತರಿಸುವ 3ನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 43(759)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

2) **ಶ್ರೀ ಹೂಲಗೇರಿ ಡಿ.ಎಸ್. ಅವರು** – "ಗ್ರಾನೈಟ್ ಘಟಕಗಳು" ಕುರಿತಂತೆ ಕೇಳಿರುವ ದಿನಾಂಕ: 13.03.2020 ರ 7ನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 92(1854)ನ್ನು ಅರ್ಧ ಗಂಟೆ ಕಾಲ ಚರ್ಚಿಸುವುದು.

8. ಖಾಸಗಿ ಸದಸ್ಯರ ಕಾರ್ಯಕಲಾಪಗಳು

ನಿರ್ಣಯಗಳು

ಶ್ರೀ ಅಭಯ ಪಾಟೀಲ ಅವರು ಈ ಕೆಳಕಂಡ ನಿರ್ಣಯಗಳನ್ನು ಮಂಡಿಸುವುದು:

1) "ಬೆಳಗಾವಿ ಹಾಗೂ ಉತ್ತರ ಕರ್ನಾಟಕದ ಪರಿಸರದಲ್ಲಿ ಹಲವಾರು ಶೈಕ್ಷಣಿಕ ವಿದ್ಯಾಸಂಸ್ಥೆಗಳು ಇದ್ದು, ಇಲ್ಲಿ ಹೆಚ್ಚು ವಿದ್ಯಾವಂತ ಯುವಕರು ನಿರುದ್ಯೋಗಿಗಳಾಗಿದ್ದು, ಉದ್ಯೋಗವನ್ನು ಅರಸಿ ಇತರ ರಾಜ್ಯಗಳಿಗೆ ವಲಸೆ ಹೋಗುತ್ತಿರುವುದನ್ನು ತಪ್ಪಿಸಲು ಹಾಗೂ ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿಗಾಗಿ ಬೆಳಗಾವಿಯಲ್ಲಿ ಒಂದು ಬೃಹತ್ ಪ್ರಮಾಣದ ಐ.ಟಿ. ಪಾರ್ಕ್‌ನ್ನು ಸ್ಥಾಪಿಸುವುದು ಅವಶ್ಯಕವಾಗಿದ್ದು, ರಾಷ್ಟ್ರೀಯ ಹೆದ್ದಾರಿ ಸಂಖ್ಯೆ:4ಕ್ಕೆ ಹೊಂದಿಕೊಂಡಿರುವ ಬೆಳಗಾವಿ ಗ್ರಾಮದ ಸರ್ವೆ ನಂ.1304 ರಿಂದ 1349 ರವರೆಗೆ ಇರುವ ಸುಮಾರು 745 ಎಕರೆಯಷ್ಟು ಜಮೀನು ರಾಜ್ಯ ಸರ್ಕಾರಕ್ಕೆ ಸೇರಿದ್ದು, ಈ ಸ್ಥಳದಲ್ಲಿ ಬೃಹತ್ ಪ್ರಮಾಣದ ಐ.ಟಿ. ಪಾರ್ಕ್‌ನ್ನು ಸ್ಥಾಪಿಸಲು ರಾಜ್ಯ ಸರ್ಕಾರವು ಕೂಡಲೇ ಕ್ರಮ ಕೈಗೊಳ್ಳಬೇಕೆಂದು ಈ ಸದನವು ಒತ್ತಾಯಿಸುತ್ತದೆ."

2) "ಭಾರತ ದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹೋರಾಡಿರುವ ಗಣ್ಯ ವ್ಯಕ್ತಿಗಳ ಹಾಗೂ ಅವರ ಐತಿಹಾಸಿಕ ಸ್ಮಾರಕಗಳನ್ನು ನಿರ್ಮಿಸುವ ಮುಖಾಂತರ ಇಂದಿನ ಯುವ ಪೀಳಿಗೆಗೆ ಅವುಗಳನ್ನು ಪರಿಚಯಿಸುವುದು ಹಾಗೂ ಸ್ವಾತಂತ್ರ್ಯ ಹೋರಾಟಗಾರರನ್ನು ಸ್ಮರಿಸಿಕೊಳ್ಳುವುದು ಈ ಸಂದರ್ಭದಲ್ಲಿ ಅತ್ಯಂತ ಅವಶ್ಯಕವಾಗಿರುತ್ತದೆ. ಆದ್ದರಿಂದ ಈ ವೀರ ಯೋಧರುಗಳ ಜೀವನ ಚರಿತ್ರೆಗಳನ್ನು ಮಾದರಿ ರೂಪದಲ್ಲಿ ಸ್ಥಾಪಿಸುವ, ವಿಜ್ಞಾನಿಗಳ ಮತ್ತು ಸ್ವತಂತ್ರ ಭಾರತಕ್ಕೆ ಹೋರಾಡಿದ ಮಹಾನ್ ವ್ಯಕ್ತಿಗಳ ಜನ್ಮಸ್ಥಳ, ಕರ್ಮಭೂಮಿ, ಜೀವನ ಚರಿತ್ರೆ ಹಾಗೂ ಸ್ಮಾರಕಗಳ ಪ್ರತಿರೂಪತೆಯ ಪಳುವಳಿಕೆಗಳನ್ನು ಒಂದೇ ಪರಿಸರದಲ್ಲಿ ಸ್ಥಾಪಿಸುವುದರಿಂದ ಇಂದಿನ ಯುವಕರಲ್ಲಿ ದೇಶಾಭಿಮಾನವನ್ನು ಹೆಚ್ಚಿಸುವುದರ ಜೊತೆಗೆ ಉತ್ತರ ಕರ್ನಾಟಕದ ಭಾಗದಲ್ಲಿ ಬೆಳಗಾವಿಯನ್ನು ಮಾದರಿ ಪ್ರವಾಸೋದ್ಯಮ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸಲು ಅವಕಾಶವಾಗುವುದರಿಂದ ಬೆಳಗಾವಿ ತಾಲ್ಲೂಕಿನ ಮಚ್ಚೆ ಗ್ರಾಮದ ಸರ್ವೆ ನಂ.559, 560, 561, ಹಾಗೂ 583 ರಲ್ಲಿರುವ ಸುಮಾರು 317 ಎಕರೆಯಷ್ಟು ಸರ್ಕಾರಿ ಜಮೀನಿನಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರದ ಸಂಯುಕ್ತ ಅನುದಾನದಲ್ಲಿ ಐತಿಹಾಸಿಕ ಸ್ಮಾರಕಗಳ ಮಾದರಿಗಳನ್ನು (ರಿಪ್ಲಿಕಾಗಳನ್ನು) ನಿರ್ಮಿಸಬೇಕೆಂದು ಈ ಸದನವು ಒತ್ತಾಯಿಸುತ್ತದೆ."

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)
